ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಆನ್‌ಲೈನ್ ಶಿಕ್ಷಣ ಕುರಿತು

ಶ್ರೀಮತಿ ಭಾರತಿ ಶೆಟ್ಟಿ(ನಾಮನಿರ್ದೇಶನ ಹೊಂದಿದವರು) -

16 (65) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಆನ್‌ಲೈನ್ ಶಿಕ್ಷಣ ವ್ಯವಸ್ಥೆಯು ಕೋವಿಡ್ ಮಾರಿಯಿಂದ ಮಕ್ಕಳಿಗೆ ಅನಿವಾರ್ಯವಾಗಿರುವ ಹಿನ್ನೆಲೆಯಲ್ಲಿ ಆನ್‌ಲೈನ್ ಶಿಕ್ಷಣದಲ್ಲಿ ವೈಜ್ಞಾನಿಕ ಮಾಪನ ವ್ಯವಸ್ಥೆಯನ್ನು ಸರ್ಕಾರ ಯಾವ ರೀತಿ ಮಾಡಿದೆ ಅಥವಾ ಮಾಡುತ್ತದೆ;

(ಆ) ಆನ್‌ಲೈನ್ ಶಿಕ್ಷಣ ಬೋಧನೆಯನ್ನು ವೈಜ್ಞಾನಿಕವಾಗಿ ನೀಡಲು ಶಿಕ್ಷಕ/ಶಿಕ್ಷಕಿಯರಿಗೆ ತರಬೇತಿ ನೀಡುವ ವ್ಯವಸ್ಥೆಯನ್ನು ಸೃಜಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

(ಇ) ಸಾಮೂಹಿಕ ಆನ್‌ಲೈನ್ ಶಿಕ್ಷಣ ವ್ಯವಸ್ಥೆಯನ್ನು ಇಂಟರ್ ಆಕ್ಟೀವ್ (Inter Active) ಮಾಡಲು ಇರುವ ತಾಂತ್ರಿಕ ತೊಡಕು ಅಥವಾ ಸವಾಲುಗಳನ್ನು ಎದುರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?